


ಪ್ರಾರಂಭಗೊಂಡಿದ್ದು, ಉಳಿದವು ಇದೇ ಮಾರ್ಚ್‌ನಲ್ಲಿ ಆರಂಭವಾಗಲಿವೆ.

ರಾಜ್ಯದ ಎಲ್ಲ ಸರ್ಕಾರಿ ಆಸ್ಪತ್ರೆಗಳಿಗೂ ದಿನೇ ದಿನೇ ರೋಗಿಗಳ ಸಂಖ್ಯೆ ಹೆಚ್ಚುತ್ತಲೇ ಇದೆ. ಅದಕ್ಕೆ ಸರಿಯಾಗಿ ಸೇವೆಯನ್ನೂ ಒದಗಿಸಬೇಕು. ಜನಸಾಮಾನ್ಯರಿಗೆ ಸಮಯಕ್ಕೆ ಸರಿಯಾಗಿ ಸೇವೆ ಒದಗಿಸಲು ವೈದ್ಯರು ಮತ್ತು ಸಿಬ್ಬಂದಿ ಹಾಜರಾಗುವುದಿಲ್ಲ ಎಂಬ ದೂರು ಇದೆ. ವೈದ್ಯರು ಮತ್ತು ಇತರ ಸಿಬ್ಬಂದಿ ಹಾಜರಾತಿಯನ್ನು ಗಮನಿಸಲು ಎಲ್ಲ ಆಸ್ಪತ್ರೆಗಳಿಗೂ ಬಯೋಮೆಟ್ರಿಕ್ ಹಾಜರಾತಿ ಅಳವಡಿಸಲಾಗಿದೆ. ಇದರಿಂದ ವೈದ್ಯರು ಮತ್ತು ಸಿಬ್ಬಂದಿ ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗುತ್ತಾರೆಯೇ ಇಲ್ಲವೇ ಎಂಬುದನ್ನು ತಿಳಿದುಕೊಳ್ಳಲು ಸಾಧ್ಯ.

## ‘ಆರೋಗ್ಯ ಕರ್ನಾಟಕ’ ಸಾರ್ವತ್ರಿಕ ಆರೋಗ್ಯ ರಕ್ಷಣೆ ಯೋಜನೆ

ರಾಜ್ಯದಲ್ಲಿ ಎಲ್ಲರಿಗೂ ಆರೋಗ್ಯ ಸೇವೆ ಖಾತರಿಗೊಳಿಸಲು ಆರೋಗ್ಯ ಇಲಾಖೆ ಪಣ ತೊಟ್ಟಿದೆ. ಇದಕ್ಕಾಗಿ ‘ಆರೋಗ್ಯ ಕರ್ನಾಟಕ’ ಎಂಬ ವಿನೂತನ ಯೋಜನೆ ಹಮ್ಮಿಕೊಂಡಿದೆ. ದೇಶದಲ್ಲಿ ರಾಜ್ಯ ಸರ್ಕಾರವೊಂದು ಪ್ರಥಮ ಬಾರಿಗೆ ಜಾರಿಗೆ ತರುತ್ತಿರುವ ಸಾರ್ವತ್ರಿಕ ಆರೋಗ್ಯ ರಕ್ಷಣಾ ಯೋಜನೆಯಿದು. ಈ ಮೂಲಕ ಬಡ ವರ್ಗದವರಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಹಂತದ ಆರೋಗ್ಯ ಸೇವೆಗಳನ್ನು ಒದಗಿಸುವುದು ಸರ್ಕಾರದ ಉದ್ದೇಶ.

ಯಶಸ್ವಿನಿ, ವಾಜಪೇಯಿ ಆರೋಗ್ಯ ಶ್ರೀ, ರಾಜೀವ್ ಆರೋಗ್ಯ ಭಾಗ್ಯ, ರಾಷ್ಟ್ರೀಯ ಸ್ವಾಸ್ಥ್ಯ ಬೀಮಾ ಯೋಜನೆ, ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಲ್ಯಾಣ ಯೋಜನೆ, ಮುಖ್ಯಮಂತ್ರಿಗಳ ಸಾಂತ್ವನ ಹರೀಶ್ ಯೋಜನೆಯನ್ನು ‘ಸಾರ್ವತ್ರಿಕ ಆರೋಗ್ಯ ರಕ್ಷಣಾ ಯೋಜನೆ’ ವ್ಯಾಪ್ತಿಗೆ ಸೇರಿಸಲಾಗಿದೆ. ಕೇಂದ್ರ ಸರ್ಕಾರದ ಆರೋಗ್ಯ ಯೋಜನೆ, ನೌಕರರ ರಾಜ್ಯ ವಿಮಾ ಯೋಜನೆ, ಖಾಸಗಿ ಆರೋಗ್ಯ ವಿಮೆ ಮತ್ತು ಇತರ ಆರೋಗ್ಯ ವಿಮಾ ಯೋಜನೆಗಳನ್ನು ಹೊಂದಿರುವವರನ್ನು ಹೊರತು ಪಡಿಸಿ ಉಳಿದವರು ಇದರ ಪ್ರಯೋಜನ ಪಡೆಯಬಹುದು. ವಿಶೇಷವಾಗಿ ಬಡ ವರ್ಗದ ಜನರನ್ನು ಗಮನದಲ್ಲಿಟ್ಟುಕೊಂಡು ಈ ಯೋಜನೆಯನ್ನು ಜಾರಿಗೆ ತರಲಾಗಿದೆ.

ಆಧಾರ್ ಕಾರ್ಡ್ ಮತ್ತು ಪಡಿತರ ಚೀಟಿ ಆಧಾರದ ಮೇಲೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರೋಗಿಗಳನ್ನು ನೋಂದಣಿ ಮಾಡಿ ಯುಐಡಿ ಸಂಖ್ಯೆ ಸಮೇತ ಕಾರ್ಡ್‌ಗಳನ್ನು ವಿತರಿಸಲಾಗುತ್ತದೆ. ಫಲಾನುಭವಿಗಳನ್ನು ಅರ್ಹ ರೋಗಿಗಳು ಮತ್ತು ಸಾಮಾನ್ಯ ರೋಗಿಗಳು ಎಂದು ಎರಡು ಗುಂಪುಗಳನ್ನಾಗಿ ವಿಂಗಡಿಸಲಾಗಿದೆ. ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್‌ದಾರರು ಇದರ ವ್ಯಾಪ್ತಿಗೆ ಒಳಪಡುತ್ತಾರೆ.

ಪ್ರಥಮ ಹಂತದ ಆಸ್ಪತ್ರೆಯಿಂದ ಯಾವುದೇ ರೋಗಿಯನ್ನು ಹೆಚ್ಚಿನ ಚಿಕಿತ್ಸೆಗೆ ಖಾಸಗಿ ಆಸ್ಪತ್ರೆಗೆ ಕಳುಹಿಸಿದರೆ, ಸರ್ಕಾರ ನಿಗದಿ ಮಾಡಿದ ದರದಲ್ಲಿ ಉಚಿತ ಚಿಕಿತ್ಸೆ ನೀಡಬೇಕು. ಇದಕ್ಕೆ ತಗುಲಿದ ವೆಚ್ಚವನ್ನು ಸರ್ಕಾರದಿಂದ ಪಡೆಯಬಹುದು. ದ್ವಿತೀಯ ಮತ್ತು ತೃತೀಯ ಹಂತದ ಚಿಕಿತ್ಸೆ ಅವಶ್ಯಕತೆ ಇರುವ ರೋಗಿಗಳು ತಮ್ಮ ಹತ್ತಿರದ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಬಹುದು. ಒಂದು ವೇಳೆ ನಿರ್ದಿಷ್ಟ ಚಿಕಿತ್ಸೆ ಲಭ್ಯವಿಲ್ಲದ್ದರೆ, ಅದೇ ಜಿಲ್ಲೆಯ ಅಥವಾ ಪಕ್ಕದ ಜಿಲ್ಲೆಯ ಆಸ್ಪತ್ರೆಗಳಿಗೆ ಕಳುಹಿಸಬಹುದು. ಅಲ್ಲಿಯೂ ಚಿಕಿತ್ಸೆ ಲಭ್ಯವಿಲ್ಲದಿದ್ದರೆ, ಸರ್ಕಾರದಿಂದ ಅಂಗೀಕೃತ ಖಾಸಗಿ ಖಾಸಗಿ ಆಸ್ಪತ್ರೆಗಳಿಗೆ ರೋಗಿಯನ್ನು ಒಯ್ಯಬಹುದು.



“ಎಲ್ಲರಿಗೂ ಆರೋಗ್ಯ; ಎಲ್ಲೆಡೆಯೂ ಆರೋಗ್ಯ”